**ಕರ್ನಾಟಕ ಸರ್ಕಾರ**

ಸಂಖ್ಯೆ: ಡಿಟಿಇ 17 ಎಸಿಎಂ(2) 2011-12

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001,
ದಿನಾಂಕ: 14/07/2011.

**-:: ಜ್ಞಾಪನ ::-**

**ವಿಷಯ:** 2011-12ನೇ ಸಾಲಿನ ದ್ವಿತೀಯ ಪಿಯುಸಿ ವಿದ್ಯಾರ್ಹತೆಗೆ ಅನುಗುಣವಾದ ಕೋರ್ಸ್‌ಗಳ ಪ್ರಥಮ ಡಿಪ್ಲೋಮಾ ಪ್ರವೇಶಕ್ಕೆ ಸಂಬಂಧಿಸಿದಂತೆ ಅರ್ಜಿಗಳ ವಿತರಣೆ ಮತ್ತು ಸ್ವೀಕರಿಸುವ ಬಗ್ಗೆ.

**ಉಲ್ಲೇಖ:**
1. ಈ ಕಛೇರಿ ಸಮ ಸಂಖ್ಯೆ ಅಧಿಸೂಚನೆ ದಿನಾಂಕ:17/05/2011 & 20-05-2011.
2. ಪ್ರಿನ್ಸಿಪಾಲರು, ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್, ಬೆಂಗಳೂರು ಇವರ ಪತ್ರ ಸಂ. ಸಮಪಾ/ಎಸಿಎಂ/2011/361, ದಿ:09-06-2011.
3. ಪ್ರಿನ್ಸಿಪಾಲರು, ಸರ್ಕಾರಿ ಚಲನಚಿತ್ರ ಮತ್ತು ದೂರದರ್ಶನ ಸಂಸ್ಥೆ, ಹೆಸರಘಟ್ಟ, ಬೆಂಗಳೂರು ಇವರ ಪತ್ರ ಸಂ.ಎಫ್‌ಟಿಐ/1/ಎಸಿಎಂ/2011/114, ದಿ:06-07-2011.
4. ಪ್ರಿನ್ಸಿಪಾಲರು, ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್, ಮಂಗಳೂರು ಇವರ ಪತ್ರ ಸಂ.ಡಬ್ಲ್ಯುಪಿಎಂ/23/ಪ್ರವೇಶ/2011-12, ದಿ:18-06-2011.
5. ಪ್ರಿನ್ಸಿಪಾಲರು, ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್, ಬೆಂಗಳೂರು ಇವರ ಪತ್ರ ಸಂ. ಸಮಪಾ/03/ಎಸಿಎಂ/2011-12/7812, ದಿ:27-06-2011.

-00000000-

2011-12ನೇ ಸಾಲಿನ ಪ್ರಥಮ ಡಿಪ್ಲೋಮಾ ಪ್ರವೇಶಕ್ಕೆ ಸಂಬಂಧಿಸಿದಂತೆ ಉಲ್ಲೇಖ(1)ರಲ್ಲಿ ಈಗಾಗಲೇ ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್‌ಗಳಿಗೆ ಅರ್ಜಿ ವಿತರಣೆ ಮತ್ತು ಸ್ವೀಕೃತಿ ಬಗ್ಗೆ ಅಧಿಸೂಚನೆಯನ್ನು ನೀಡಲಾಗಿತ್ತು. ಈ ಸಂಬಂಧದಲ್ಲಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಸ್ವೀಕರಿಸುವ ಅಂತಿಮ ದಿನಾಂಕವನ್ನು 09/06/2011 ಎಂದು ನಿಗದಿಪಡಿಸಿ ಎಲ್ಲಾ ನೋಡಲ್ ಸೆಂಟರ್‌ಗಳ ಮೂಲಕ ಪ್ರಸಕ್ತ ಸಾಲಿನ ಡಿಪ್ಲೋಮಾ ಪ್ರವೇಶ ಪ್ರಕ್ರಿಯೆಯನ್ನು ಮುಕ್ತಾಯಗೊಳಿಸಲಾಗಿರುತ್ತದೆ.

ಉಲ್ಲೇಖ(2) ರಿಂದ (6)ರ ವರೆಗಿನ ಪತ್ರಗಳಲ್ಲಿ ಪ್ರಿನ್ಸಿಪಾಲರುಗಳು ತಮ್ಮ ಸಂಸ್ಥೆಯಲ್ಲಿನ ದ್ವಿತೀಯ ಪಿಯುಸಿ ವಿದ್ಯಾರ್ಹತೆಗೆ ಅನುಗುಣವಾದ ಕೋರ್ಸ್‌ಗಳಾದ ಲೈಬ್ರರಿ ಸೈನ್ಸ್, ಸಿನಿಮಾಟೋಗ್ರಫಿ ಮತ್ತು ಸೌಂಡ್ ರೆಕಾರ್ಡಿಂಗ್ ಪ್ರವೇಶಕ್ಕೆ ಸಂಬಂಧಿಸಿದಂತೆ ಇನ್ನೂ ಅನೇಕ ಸ್ಥಾನಗಳು ಖಾಲಿ ಇರುವುದಾಗಿ ಸಂಬಂಧಿಸಿದ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರು ವರದಿ ಮಾಡಿ ಪ್ರಸ್ತುತ ದ್ವಿತೀಯ ಪಿಯುಸಿ ಪೂರಕ ಪರೀಕ್ಷಾ ಫಲಿತಾಂಶ ಪ್ರಕಟವಾಗುವುದನ್ನು ಪರಿಗಣಿಸಿ ಪ್ರವೇಶಾವಧಿಯನ್ನು ಪೂರಕ ಪರೀಕ್ಷೆಯಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳಿಗೂ ಅನ್ವಯವಾಗುವಂತೆ ವಿಸ್ತರಿಸಬೇಕೆಂದು ಕೋರಿರುವುದನ್ನು ಪರಿಗಣಿಸಿ ವಿದ್ಯಾರ್ಥಿಗಳ ಶೈಕ್ಷಣಿಕ ಹಾಗೂ ಸಾರ್ವಜನಿಕರ ಹಿತದೃಷ್ಟಿಯ ಮೇರೆಗೆ ಮೇಲ್ಕಂಡ ಕೋರ್ಸುಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಸ್ವೀಕರಿಸಲು ಈ ಕೆಳಕಂಡಂತೆ ಅವಧಿಯನ್ನು ವಿಸ್ತರಿಸಿ ಅನುಮತಿ ನೀಡಲಾಗಿದೆ.

1. **ಅರ್ಜಿ ಪಡೆಯಲು ವಿಸ್ತರಿಸಲಾದ ದಿ:14-07-2011 ರಿಂದ ದಿ:27-07-2011 ಮಧ್ಯಾಹ್ನ 5:00 ಗಂಟೆಯವರೆಗೆ**
2. **ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸುವ ದಿ:28-07-2011 – ಸಂಜೆ 4:30 ಗಂಟೆಯೊಳಗೆ**

ಮೇಲೆ ನಮೂದಿಸಿರುವಂತೆ ಕೂಡಲೇ ಕ್ರಮ ತೆಗೆದುಕೊಂಡು ಈ ಬಗ್ಗೆ ಸ್ಥಳೀಯವಾಗಿ ಪತ್ರಿಕಾ ಪ್ರಕಟಣೆಯನ್ನು ನೀಡಿ, ನಿಯಮಗಳ ಪ್ರಕಾರ **ದಿ:30-07-2011** ರೊಳಗೆ ಪ್ರವೇಶ ಪ್ರಕ್ರಿಯೆಯನ್ನು ಪ್ರಿನ್ಸಿಪಾಲರುಗಳು

ತಮ್ಮ ಹಂತದಲ್ಲಿಯೇ ಅರ್ಹ ಅಭ್ಯರ್ಥಿಗಳ ಪ್ರವೇಶ ಪ್ರಕ್ರಿಯೆ ಪೂರ್ಣಗೊಳಿಸತಕ್ಕದ್ದು. ಪ್ರವೇಶಾವಧಿಯನ್ನು ವಿಸ್ತರಿಸಲಾದ ಅವಧಿಯಲ್ಲಿ ಪ್ರವೇಶ ಪಡೆದ ಅಭ್ಯರ್ಥಿಗಳ ಸಂಬಂಧದಲ್ಲಿ ನಿಯಮಾನುಸಾರ ಕನಿಷ್ಠ ಹಾಜರಾತಿಯನ್ನು ಪೂರೈಸುವ ಷರತ್ತಿಗೊಳಪಟ್ಟಿರುತ್ತದೆ. ಸದರಿ ಅಭ್ಯರ್ಥಿಗಳಿಗೆ ಪ್ರಥಮ ಡಿಪ್ಲೋಮಾ ತರಗತಿಗಳನ್ನು ಪ್ರಾರಂಭಿಸಲು ಸೂಕ್ತ ವ್ಯವಸ್ಥೆ ಮಾಡುವುದಲ್ಲದೆ, ಮೇಲ್ಕಂಡ ವಿಸ್ತರಿಸಲಾದ ಅವಧಿಯಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿಗಳಿಗೆ ವಿಶೇಷ ತರಗತಿಗಳನ್ನು ತೆಗೆದುಕೊಳ್ಳುವುದರ ಮೂಲಕ ಪಠ್ಯಕ್ರಮದನ್ವಯ ನಿಗದಿತ ಪಾಠ ಪ್ರವಚನಗಳನ್ನು ಮುಗಿಸುವಲ್ಲಿ ಕ್ರಮತೆಗೆದುಕೊಂಡು ನಿರ್ದೇಶನಾಲಯಕ್ಕೆ ವರದಿ ಮಾಡುವುದು.

**ಪ್ರಥಮ ಡಿಪ್ಲೋಮಾ ಪ್ರವೇಶಾವಧಿಯನ್ನು ಪುನಃ ವಿಸ್ತರಿಸಲಾಗುವುದಿಲ್ಲ, ಪ್ರಯುಕ್ತ, ಇದನ್ನು ಆಯಾ ಪಾಲಿಟೆಕ್ನಿಕ್‌ನ ಪ್ರಿನ್ಸಿಪಾಲರು ಗಮನದಲ್ಲಿರಿಸಿಕೊಂಡು ನಿಯಮಗಳ ಪ್ರಕಾರ ಪ್ರವೇಶವನ್ನು ಪೂರೈಸುವಲ್ಲಿ ಕ್ರಮ ತೆಗೆದುಕೊಳ್ಳಬೇಕೆಂದು ತಿಳಿಸಲಾಗಿದೆ.**

ನಿರ್ದೇಶಕರು

<u>ಇವರಿಗೆ,</u>

1. ಪ್ರಿನ್ಸಿಪಾಲರು, ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್, ಬೆಂಗಳೂರು
2. ಪ್ರಿನ್ಸಿಪಾಲರು, ಸರ್ಕಾರಿ ಚಲನಚಿತ್ರ ಮತ್ತು ದೂರದರ್ಶನ ಸಂಸ್ಥೆ, ಹೆಸರಘಟ್ಟ, ಬೆಂಗಳೂರು.
3. ಪ್ರಿನ್ಸಿಪಾಲರು, ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್, ಮಂಗಳೂರು
4. ಪ್ರಿನ್ಸಿಪಾಲರು, ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್, ಹಾಸನ.
5. ಪ್ರಿನ್ಸಿಪಾಲರು, ಎಸ್.ಜೆ.ಸರ್ಕಾರಿ ಪಾಲಿಟೆಕ್ನಿಕ್, ಬೆಂಗಳೂರು – **ಬೆಂಗಳೂರಿಗೆ ಮಾತ್ರ ಅನ್ವಯವಾಗುವಂತೆ ಲೈಬ್ರರಿ ಸೈನ್ಸ್ ಕೋರ್ಸಿನ ಸೀಟು ಆಯ್ಕೆ ಪ್ರಕ್ರಿಯೆಯನ್ನು ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್, ಬೆಂಗಳೂರಿನಲ್ಲಿ ಹಾಗೂ ಸಿನಿಮಾಟೋಗ್ರಫಿ ಮತ್ತು ಸೌಂಡ್ ರೆಕಾರ್ಡಿಂಗ್ ಕೋರ್ಸಿನ ಸೀಟು ಆಯ್ಕೆ ಪ್ರಕ್ರಿಯೆಯನ್ನು ಸರ್ಕಾರಿ ಚಲನಚಿತ್ರ ಮತ್ತು ದೂರದರ್ಶನ ಸಂಸ್ಥೆ, ಹೆಸರಘಟ್ಟ, ಬೆಂಗಳೂರು ನಡೆಸುವ ಬಗ್ಗೆ ತಮ್ಮ ಹಂತದಲ್ಲಿಯೇ ಕ್ರಮ ತೆಗೆದುಕೊಂಡು ನಿಯಮಗಳ ಪ್ರಕಾರ ಪ್ರವೇಶ ನಡೆಸುವಲ್ಲಿ ಸೂಕ್ತ ವ್ಯವಸ್ಥೆ ಮಾಡಿ ನಿರ್ದೇಶನಾಲಯಕ್ಕೆ ಮಾಹಿತಿ ನೀಡುವುದು. ಹಾಗೂ ಈ ಬಗ್ಗೆ ಪ್ರತ್ಯೇಕ ಮಾರ್ಗಸೂಚಿಯನ್ನು ವಿದ್ಯಾರ್ಥಿಗಳಿಗೆ ನೋಡಲ್ ಸೆಂಟರ್‌ನಿಂದಲೇ ನೀಡುವುದು. ಹಾಗೂ ಸಂಸ್ಥೆಯ ಸೂಚನಾ ಫಲಕದಲ್ಲೂ ಸಹ ಪ್ರಕಟಿಸುವುದು.**
6. ಸಾರ್ವಜನಿಕ ಸಂಪರ್ಕಾಧಿಕಾರಿಗಳು, ತಾಂ.ಶಿ.ನಿ, ಬೆಂಗಳೂರು.
7. ನಿರ್ದೇಶಕರ ಆಪ್ತಶಾಖೆಗೆ.
8. ಸಂಯೋಜನಾಧಿಕಾರಿಗಳು, ಇ-ಆಡಳಿತ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ. ಬೆಂಗಳೂರು.
9. ಕಛೇರಿ ಪ್ರತಿ.